**ವಿಷಯ:** ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಾಕಾಂಕ್ಷೆ ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿ.ಜೆ.ಎಸ್ ಸರ್ಕಾರೇತರ ಸಂಸ್ಥೆಯ ಮೂಲಕ ಕೆರೆಗಳ ಹೂಳೆತ್ತುವ ಕಾರ್ಯಕ್ರಮವನ್ನು ಕೃಷಿ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುವ ಕುರಿತು.

**ಓದಲಾಗಿದೆ**

1. ಸಿ.ಇ.ಓ, ನೀತಿ ಆಯೋಗ, ಹೊಸದೆಹಲಿ ಇವರ ದಿನಾಂಕ: 4.09.2018 ರ ಪತ್ರ.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ದಿನಾಂಕ: 06.12.2018ರ ಟಿಪ್ಪಣಿ
3. ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: PSCM-F-5590-18 (Belgaum) ದಿನಾಂಕ: 11.12.2018.
4. ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: 1290/ವೆಚ್ಚ-12/12/2018 ದಿನಾಂಕ: 12.12.2018
5. ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ ಇವರ ಟಿಪ್ಪಣಿ ಸಂಖ್ಯೆ: ಸನಿಇ 208 ಮಸವಿ 2018, ದಿನಾಂಕ: 13.12.2018.
6. ಕೃಷಿ ಇಲಾಖೆಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 15.12.2018 ರಂದು ನಡೆದ ಸಭೆಯ ನಡವಳಿ.

* * *

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನೀತಿ ಆಯೋಗದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ದೇಶವನ್ನು ಬರಮುಕ್ತಗೊಳಿಸಿ ಆಹಾರ ಭದ್ರತೆ ಒದಗಿಸಲು ನೀತಿ ಆಯೋಗವು ಕಳೆದ ನಾಲ್ಕು ವರ್ಷಗಳಿಂದ ಭಾರತೀಯ ಜೈನ ಸಂಘಟನಾ ಸಹಯೋಗದೊಂದಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ನೀರಿನ ಸಂರಕ್ಷಣೆ/ಸಂಗ್ರಹಣೆ/ಜಲಮೂಲಗಳ ಅಭಿವೃದ್ಧಿ ಕಾರ್ಯ ಕೈಗೊಂಡಿರುತ್ತದೆ. ಈ ದಿಸೆಯಲ್ಲಿ ಕರ್ನಾಟಕದ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳನ್ನು ಆಯ್ಕೆ ಮಾಡಿ ಭಾರತೀಯ ಜೈನ ಸಂಘಟನಾ ಸಹಯೋಗದೊಂದಿಗೆ ಈ ಜಿಲ್ಲೆಗಳಲ್ಲಿರುವ ಕೆರೆಗಳ ಹೂಳೆತ್ತಿ ನೀರಿನ ಸಂಗ್ರಹ ಹೆಚ್ಚಿಸಲು ಅಧಿಸೂಚಿಸಿದ್ದು, ಈ ಕಾರ್ಯಕ್ರಮಕ್ಕೆ ಬಳಸುವ ವಾಹನಗಳಿಗೆ ಇಂಧನ ತುಂಬಿಸುವ ಮತ್ತು ತಗಲುವ ಇನ್ನಿತರೆ ಸಣ್ಣಪುಟ್ಟ ವೆಚ್ಚವನ್ನು ರಾಜ್ಯ ಸರ್ಕಾರದಿಂದ ಭರಿಸುವಂತೆ ಪ್ರಸ್ತಾಪಿಸಲಾಗಿದೆ.

ಮೇಲೆ ಓದಲಾದ (2)ರ ಟಿಪ್ಪಣಿಯಲ್ಲಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಕೆರೆಗಳ ಹೂಳೆತ್ತುವ ಕಾರ್ಯಕ್ರಮ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ದಿನಾಂಕ: 15.12.2018 ರಂದು ಮಾನ್ಯ ಮುಖ್ಯಮಂತ್ರಿಯವರ ಸಮಕ್ಷಮದಲ್ಲಿ ನೀತಿ ಆಯೋಗ/ಬಿ.ಜೆ.ಎಸ್ ರವರೊಂದಿಗೆ ಒಪ್ಪಂದಕ್ಕೆ ಸಹಿ ಮಾಡಲು ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ. ಅದರಂತೆ ಈ ಕಾರ್ಯಕ್ರಮದ ನೋಡಲ್ ಅಧಿಕಾರಿಯಾಗಿರುವ ಜಲಾನಯನ ಅಭಿವೃದ್ಧಿ ಇಲಾಖೆಯ ಆಯುಕ್ತರು ದಿನಾಂಕ: 15.12.2018 ರಂದು ಬಿ.ಜೆ.ಎಸ್ ಸಂಸ್ಥೆಯೊಂದಿಗೆ ಕಾರ್ಯಕ್ರಮದ MoU ಗೆ ಜಂಟಿ ಸಹಿ ಹಾಕಿರುತ್ತಾರೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಾಕಾಂಕ್ಷಿ (ಆಸ್ಪಿರೇಶನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿ.ಜೆ.ಎಸ್ ಸಂಸ್ಥೆಯ ಸಹಯೋಗದೊಂದಿಗೆ ಕೆರೆಗಳ ಹೂಳೆತ್ತುವ ಕಾರ್ಯಕ್ರಮದ ಅನುಷ್ಠಾನಕ್ಕೆ ಕೃಷಿ ಇಲಾಖೆಯಿಂದ ಒದಗಿಸಲು ಪ್ರಸ್ತಾಪಿಸಿರುವ ಡಿಸೆಲ್ (ಇಂಧನ)ದ ವಾರ್ಷಿಕ ವೆಚ್ಚ ರೂ. 10.00 ರಿಂದ 20.00 ಕೋಟಿಗಳ ಮೊತ್ತವನ್ನು ಕೃಷಿ ಇಲಾಖೆಯ ಒಟ್ಟಾರೆ ಉಳಿತಾಯದಿಂದ ಭರಿಸುವಂತೆ, ಅಗತ್ಯವಿದ್ದಲ್ಲಿ ಪೂರಕ ಅಂದಾಜಿನಲ್ಲಿ ಹೆಚ್ಚುವರಿ ಅನುದಾನ ಕೋರುವಂತೆ ಸೂಚಿಸಲಾಗಿದೆ.

...2

ಮೇಲೆ ಓದಲಾದ (4)ರಲ್ಲಿ ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಾಕಾಂಕ್ಷಿ (ಆಸ್ಪಿರೇಶನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಹಾರಾಷ್ಟ ಮಾದರಿಯಲ್ಲಿ ಬಿ.ಜೆ.ಎಸ್ ಇವರಿಂದ ಕೆರೆಗಳ ಹೂಳೆತ್ತುವ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಯವರ ಉಸ್ತುವಾರಿಯಲ್ಲಿ ಒಂದು ವರ್ಷದ ಅವಧಿಗೆ ನೇರವಾಗಿ ಅನುಷ್ಠಾನಗೊಳಿಸಲು ಕೆ.ಟಿ.ಪಿ.ಪಿ ಅಧಿನಿಯಮ 1999 ರ ಕಲಂ 4(ಜಿ) ರಡಿ ಕೃಷಿ ಇಲಾಖೆಗೆ ವಿನಾಯಿತಿ ನೀಡಲಾಗಿದೆ.

ಮೇಲೆ ಓದಲಾದ (5)ರ ಟಿಪ್ಪಣಿಯಲ್ಲಿ ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಹಾಗೂ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಕೆರೆ ಅಭಿವೃದ್ಧಿ ಪ್ರಾಧಿಕಾರ ಇವರು ಪ್ರಸ್ತಾಪಿತ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಕೆರೆಗಳಲ್ಲಿ ಮಹಾರಾಷ್ಟ ಮಾದರಿಯಲ್ಲಿ ಭಾರತೀಯ ಜೈನ ಸಂಘಟನೆ (ಬಿ.ಜೆ.ಎಸ್) ಸರ್ಕಾರೇತರ ಸಂಸ್ಥೆಯಿಂದ ಕೆರೆಗಳ ಹೂಳನ್ನು ತೆಗೆಯುವ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರಕ್ಕೆ ಯಾವುದೇ ಹೊರೆ ಆಗದಂತೆ ಹಮ್ಮಿಕೊಂಡು ಅನುಷ್ಠಾನಗೊಳಿಸಲು ಸಹಮತಿ ನೀಡಿರುತ್ತಾರೆ.

ಮೇಲೆ ಓದಲಾದ (6)ರಂತೆ ಕೃಷಿ ಇಲಾಖೆಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 15.12.2018 ರಂದು ನಡೆದ ಸಭೆಯಲ್ಲಿ "The Govt. in Agriculture Department shall immediately issue the Govt. Order on this program and notify the Head of account through which Govt. of Karnataka funding towards diesel cost and administrative cost shall be made available to both the districts Deputy Commissioners." ಎಂದು ಸೂಚಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಾಕಾಂಕ್ಷೆ (ಆಸ್ಪಿರೇಶನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿ.ಜೆ.ಎಸ್ ಸಂಸ್ಥೆಯ ಸಹಯೋಗದೊಂದಿಗೆ ಕೆರೆಗಳ ಹೂಳೆತ್ತುವ ಪ್ರಸ್ತಾಪಿತ ಕಾರ್ಯಕ್ರಮಕ್ಕೆ ಕೃಷಿ ಇಲಾಖೆಯಲ್ಲಿ ಯಾವುದೇ ಲೆಕ್ಕ ಶೀರ್ಷಿಕೆ ಅಥವಾ ಅನುದಾನ ಲಭ್ಯವಿರುವುದಿಲ್ಲ. ಆದಾಗ್ಯೂ ಈ ಕಾರ್ಯಕ್ರಮವನ್ನು ಕೃಷಿ ಇಲಾಖೆಯ ವತಿಯಿಂದ ಜಾರಿಗೊಳಿಸಬೇಕೆಂಬ ಉದ್ದೇಶದಿಂದ ಪ್ರಸ್ತುತ ವರ್ಷಕ್ಕೆ ಈ ಯೋಜನೆಯನ್ನು ಲೆಕ್ಕ ಶೀರ್ಷಿಕೆ 2401–00–102–0–28 (059) ರಡಿ ಅಧಿಸೂಚಿಸಲು ಹಾಗೂ ಸದರಿ ಲೆಕ್ಕಶೀರ್ಷಿಕೆಯಲ್ಲಿ ರೂ.10.00 ಕೋಟಿಗಳನ್ನು ಉಳಿತಾಯ ಆಗುವ ಅನುದಾನದಿಂದ ಪ್ರಸ್ತುತ ವರ್ಷಕ್ಕೆ ಬಿಡುಗಡೆಗೊಳಿಸಿ, ಆಯಾ ಜಿಲ್ಲಾಧಿಕಾರಿಗಳ ಮೂಲಕ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 163 ಕೃಯೋಕಾ 2018, ಬೆಂಗಳೂರು, ದಿನಾಂಕ:14.01.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದ ಕೃಷಿ ಕಲ್ಯಾಣ ಮಹಾತ್ವಾಕಾಂಕ್ಷಿ (ಆಸ್ಪಿರೇಶನ್) ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೆರೆಗಳ ಹೂಳೆತ್ತುವ ಕಾರ್ಯಕ್ರಮವನ್ನು ಮಹಾರಾಷ್ಟ ಮಾದರಿಯಲ್ಲಿ ಭಾರತೀಯ ಜೈನ ಸಂಘಟನಾ(ಬಿ.ಜೆ.ಎಸ್) ಸಂಸ್ಥೆ, ಪುಣೆ, ಮಹಾರಾಷ್ಟ್ರ ಇವರ ಸಹಯೋಗದೊಂದಿಗೆ ಕೃಷಿ ಇಲಾಖೆಯ ಲೆಕ್ಕ ಶೀರ್ಷಿಕೆ 2401–00–102–0–28 (059) ರಡಿ ಆಯಾ ಜಿಲ್ಲಾಧಿಕಾರಿಯವರ ಉಸ್ತುವಾರಿಯಲ್ಲಿ ಅನುಷ್ಠಾನಗೊಳಿಸಲು ಹಾಗೂ ಸದರಿ ಲೆಕ್ಕಶೀರ್ಷಿಕೆಯಲ್ಲಿ 2018–19ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಿಂದ ರೂ.10.00 ಕೋಟಿಗಳ (ರೂಪಾಯಿ ಹತ್ತು ಕೋಟಿಗಳು ಮಾತ್ರ) ಅನುದಾನವನ್ನು ಬಿಡುಗಡೆಗೊಳಿಸಿ, ಈ ಕೆಳಕಂಡ ಷರತ್ತಿನೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

1. ಈ ಕಾರ್ಯಕ್ರಮದ ನೋಡಲ್ ಅಧಿಕಾರಿಯನ್ನಾಗಿ, ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರನ್ನು ನೇಮಿಸಲಾಗಿದೆ.

...3

2. ದಿನಾಂಕ: 15.12.2018 ರಂದು ಬಿ.ಜೆ.ಎಸ್ ಸಂಸ್ಥೆಯೊಂದಿಗೆ ಸಹಿ ಮಾಡಿರುವ MoU ರನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸತಕ್ಕದ್ದು.
3. ಪ್ರಸ್ತಾಪಿತ ಜಿಲ್ಲೆಗಳ ಕೆರೆಗಳ ಹೂಳೆತ್ತುವ ಕಾರ್ಯಕ್ರಮಕ್ಕೆ ಬಳಸುವ ವಾಹನಗಳ ಇಂಧನಕ್ಕೆ ತಗಲುವ ವೆಚ್ಚವನ್ನು 2018-19ರ ಆರ್ಥಿಕ ವರ್ಷದ ಅಂತ್ಯದವರೆಗೆ ಕೃಷಿ ಇಲಾಖೆಯ ಲೆಕ್ಕ ಶೀರ್ಷಿಕೆ 2401-00-102-0-28 (059) ಅಡಿಯಲ್ಲಿ ವೆಚ್ಚ ಭರಿಸುವುದು.
4. ಈ ಕಾರ್ಯಕ್ರಮದ ಅನುಷ್ಠಾನಕ್ಕೆ ಆರ್ಥಿಕ ಇಲಾಖೆಯು ಕೆ.ಟಿ.ಪಿ.ಪಿ ಅಧಿನಿಯಮ, 1999 ರ ಕಲಂ 4(ಜಿ) ರಡಿ ಕೃಷಿ ಇಲಾಖೆಗೆ ನೀಡಲಾದ ವಿನಾಯಿತಿಯಂತೆ ಆಯಾ ಜಿಲ್ಲಾಧಿಕಾರಿಯವರ ಉಸ್ತುವಾರಿಯಲ್ಲಿ ಬಿ.ಜೆ.ಎಸ್ ಸಂಸ್ಥೆ, ಪುಣೆ ಮಹಾರಾಷ್ಟ್ರ ಇವರಿಂದ ಕೆರೆಯ ಹೂಳೆತ್ತುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 816 ವೆಚ್ಚ-4/2018, ದಿನಾಂಕ:29-12-2018 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಂ&ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ನಿರ್ದೇಶಕರು, ಖಿಓಆ, ಖನಿಜ ಭವನ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ (ಈಖ & ಅಅ), ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
12. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
13. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.